# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.

ಸಂಖ್ಯೆ: BBMP/Addl.Dir/ JDNORTH/LP/0559/2011-12 ದಿನಾಂಕ: 20-01-2015

## ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ)

ವಿಷಯ: ಆಸ್ತಿ ಸಂಖ್ಯೆ 808/839/892/48/1, 46/1, 47/1, ಅಂಬಲೀಪುರ ಗ್ರಾಮ, ಸರ್ಜಾಪುರ ರಸ್ತೆ, ಮಾರತ್‌ಹಳ್ಳಿ ಉಪ-ವಿಭಾಗ, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ ನಿರ್ಮಿಸುತ್ತಿರುವ ಬ್ಲಾಕ್ – ಎ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JDNORTH/0559/2011-12 ದಿನಾಂಕ: 18-01-2013
2) ತಮ್ಮ ಮನವಿ ಪತ್ರ ದಿನಾಂಕ: 30-06-2014

* * * * * * *

ಆಸ್ತಿ ಸಂಖ್ಯೆ 808/839/892/48/1, 46/1, 47/1, ಅಂಬಲೀಪುರ ಗ್ರಾಮ, ಸರ್ಜಾಪುರ ರಸ್ತೆ, ಮಾರತ್‌ಹಳ್ಳಿ ಉಪ-ವಿಭಾಗ, ಮಹದೇವಪುರ ವಲಯ, ಬೆಂಗಳೂರು, ಇಲ್ಲಿ 2 ತಳ + ನೆಲ + ಮೇಲಿನ 15 ಅಂತಸ್ತುಗಳ ಬ್ಲಾಕ್ – ಎ ವಸತಿ ಸಮುಚ್ಚಯ ಮತ್ತು 3 ತಳ ಅಂತಸ್ತುಗಳ ಬ್ಲಾಕ್ – ಬಿ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 18-01-2013 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಪ್ರಾರಂಭಿಕ ಪ್ರಮಾಣಪತ್ರ (ಭಾಗಶಃ) ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಸದರಿ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ತಂಭಗಳನ್ನು ನಿರ್ಮಿಸಲಾಗಿರುತ್ತದೆ.

ಪ್ರಧಾನ ಅಭಿಯಂತರರು ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 21-11-2014 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡದ ಪ್ರಾರಂಭಿಕ ಪ್ರಮಾಣಪತ್ರದ ಬಾಬ್ತು ಶುಲ್ಕ ರೂ. 1,20,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: TP/JDTPNRT/01/2014-15/Dec/0012, ದಿನಾಂಕ: 05-12-2014 ರಂದು ಸಂದಾಯ ಮಾಡಿರುವುದರಿಂದ, ಸದರಿ ಬ್ಲಾಕ್ – ಎ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
4. ಮಂಜೂರಾದ ನಕ್ಷೆಯ ಅನುಸಾರ ಬ್ಲಾಕ್ – ಬಿ ವಸತಿ ಸಮುಚ್ಚಯ ಕಟ್ಟಡದ ಕಾಮಗಾರಿಯನ್ನು ಪ್ರಾರಂಭಿಸಿ, ಆರ್.ಸಿ.ಸಿ. ಸ್ತಂಭಗಳನ್ನು ಅಳವಡಿಸಿದ ನಂತರ ಆ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರಕ್ಕಾಗಿ ಪ್ರತ್ಯೇಕವಾಗಿ ಮನವಿ ಸಲ್ಲಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.

5. ಉದ್ಯಾನವನ ಹಾಗೂ ಬಯಲು ಜಾಗವನ್ನು ಕಾಯ್ದಿರಿಸದೇ ಇರುವುದರಿಂದ, ಅಷ್ಟೇ ವಿಸ್ತೀರ್ಣದ ಮಾರುಕಟ್ಟೆ ಬೆಲೆ ರೂ. 1,92,20,200/- ಗಳನ್ನು ಪಾಲಿಕೆಗೆ ಪಾವತಿಸುವ ಸಂಬಂಧ ಘನ ಉಚ್ಚ ನ್ಯಾಯಾಲಯದಲ್ಲಿನ ರಿಟ್ ಅರ್ಜಿ ಸಂಖ್ಯೆ: 108/2015 (ಎಲ್‌ಬಿ-ಬಿಎಂಪಿ) & 706-707/2015 ಗೆ ದಿನಾಂಕ: 13-01-2015 ರಂದು ತಡೆಯಾಜ್ಞೆ ನೀಡಿರುವುದರಿಂದ, ನ್ಯಾಯಾಲಯದ ಅಂತಿಮ ತೀರ್ಪಿಗೆ ಬದ್ಧರಾಗಿರತಕ್ಕದ್ದು.

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಗೆ,
ಮೆ: ಕೃಷ್ಣ ಇ ಕ್ಯಾಂಪಸ್ ಪ್ರೈ ಲಿ.,
# 808/839/892/48/1, 46/1, 47/1, ಅಂಬಲೀಪುರ ಗ್ರಾಮ,
ಸರ್ಜಾಪುರ ರಸ್ತೆ, ಮಾರತ್‌ಹಳ್ಳಿ ಉಪ-ವಿಭಾಗ,
ಮಹದೇವಪುರ ವಲಯ, ಬೆಂಗಳೂರು,